**C**

**SL. No. : F**

ಒಟ್ಟು ಪ್ರಶ್ನೆಗಳ ಸಂಖ್ಯೆ : 52 ]
Total No. of Questions : 52 ]

**CCE PR**
**REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12
[ Total No. of Printed Pages : 12

**ಸಂಕೇತ ಸಂಖ್ಯೆ : 83-K** **Code No. : 83-K**

# ವಿಷಯ : ವಿಜ್ಞಾನ

## Subject : SCIENCE

**(ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ / Physics, Chemistry & Biology)**

**(ಕನ್ನಡ ಭಾಷಾಂತರ / Kannada Version)**

**(ಹೊಸ ಪಠ್ಯಕ್ರಮ / New Syllabus)**

**(ಪುನರಾವರ್ತಿತ ಖಾಸಗಿ ಅಭ್ಯರ್ಥಿ / Private Repeater)**

ದಿನಾಂಕ : 24. 06. 2019 ] [ Date : 24. 06. 2019

ಸಮಯ : ಬೆಳಗ್ಗೆ 9-30 ರಿಂದ ಮಧ್ಯಾಹ್ನ 12-45 ರವರೆಗಿ ] [ Time : 9-30 A.M. to 12-45 P.M.

ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು 52 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತದೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಪರ್ಯಾಯ ಉತ್ತರಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ.** $10 \times 1 = 10$

1. ಆಧುನಿಕ ಆವರ್ತಕ ಕೋಷ್ಟಕದಲ್ಲಿರುವ ಗುಂಪುಗಳ (ಅಥವಾ ವರ್ಗಗಳ) ಮತ್ತು ಆವರ್ತಗಳ ಸಂಖ್ಯೆಯು ಕ್ರಮವಾಗಿ

   (A) 7 ಮತ್ತು 9 (B) 18 ಮತ್ತು 7

   (C) 7 ಮತ್ತು 18 (D) 9 ಮತ್ತು 7

2. ವಿದಳನ ಕ್ರಿಯೆಯಿಂದ ಮಾತ್ರ ಸಂತಾನೋತ್ಪತ್ತಿ ನಡೆಸುವ ಜೀವಿಗಳ ಗುಂಪು

   (A) ಅಮೀಬಾ, ಹೈಡ್ರಾ, ಸ್ಪೈರೋಗೈರಾ (B) ಲಿಶ್ಮೇನಿಯಾ, ಅಮೀಬಾ, ಯೀಸ್ಟ್

   (C) ಅಮೀಬಾ, ಪ್ಲಾಸ್ಮೋಡಿಯಂ, ಪ್ಲನೇರಿಯಾ (D) ಪ್ಲಾಸ್ಮೋಡಿಯಂ, ಅಮೀಬಾ, ಲಿಶ್ಮೇನಿಯಾ

3. ಸಣ್ಣ ಕರುಳಿನಲ್ಲಿ ನಡೆಯುವ ಜೀರ್ಣಕ್ರಿಯೆಗೆ ಸಂಬಂಧಿಸಿದಂತೆ ಸರಿಯಾದ ಹೇಳಿಕೆಯೆಂದರೆ

   (A) ಆಮ್ಲೀಯ ಆಹಾರವು ಪಿತ್ತರಸದಿಂದಾಗಿ ಕ್ಷಾರೀಯವಾಗುತ್ತದೆ

   (B) ಹೈಡ್ರೋಕ್ಲೋರಿಕ್ ಆಮ್ಲದಿಂದಾಗಿ ಆಹಾರವು ಆಮ್ಲೀಯವಾಗುತ್ತದೆ

   (C) ಅಮೈಲೇಸ್‌ನ ಕ್ರಿಯೆಯಿಂದಾಗಿ ಪಿಷ್ಟವು ಜೀರ್ಣವಾಗುತ್ತದೆ

   (D) ಪೆಪ್ಸಿನ್‌ನ ಕ್ರಿಯೆಯಿಂದಾಗಿ ಪ್ರೋಟೀನ್ ಜೀರ್ಣವಾಗುತ್ತದೆ

4. ಇವುಗಳಲ್ಲಿ ಯಾವುದು ಪರಿಸರ ಸ್ನೇಹಿಯಾಗಿದೆ ?

   (A) ಉಷ್ಣ ವಿದ್ಯುತ್ ಸ್ಥಾವರ (B) ಜಲವಿದ್ಯುದಾಗಾರ

   (C) ಜೈವಿಕ ಅನಿಲ ಸ್ಥಾವರ (D) ಪರಮಾಣು ಶಕ್ತಿ ಸ್ಥಾವರ

5. ಕೆಳಗೆ ಕೊಟ್ಟಿರುವ ಆಹಾರ ಸರಪಳಿಯನ್ನು ಗಮನಿಸಿ :

   ಹುಲ್ಲು → ಮಿಡತೆ → ಕಪ್ಪೆ → ಹಾವು → ಹದ್ದು

   ಮೊದಲನೇ ಪೋಷಣಾಸ್ತರಕ್ಕೆ ಲಭ್ಯವಿರುವ ಶಕ್ತಿ 5000 J ಗಳಾದರೆ, ಹಾವಿಗೆ ದೊರಕುವ ಶಕ್ತಿಯ ಪ್ರಮಾಣ

   (A) 500 J (B) 5 J

   (C) 0·5 J (D) 50 J

6. ಕೆಳಗಿನವುಗಳಲ್ಲಿ ಸಾಧ್ಯವಾಗುವ ರಾಸಾಯನಿಕ ಕ್ರಿಯೆ


(A) $FeSO_4 + Pb \rightarrow PbSO_4 + Fe$

(B) $ZnSO_4 + Fe \rightarrow FeSO_4 + Zn$

(C) $2\,AgNO_3 + Cu \rightarrow Cu(NO_3)_2 + 2\,Ag$

(D) $PbCl_2 + Cu \rightarrow CuCl_2 + Pb$

7. ಚಿತ್ರದಲ್ಲಿ ನಿರ್ಗಮ ಕಿರಣವನ್ನು ಗುರುತಿಸಿ :




(A) CD (B) BC

(C) AB (D) IJ

8. $Fe_2O_3 + 2\,Al \rightarrow Al_2O_3 + 2\,Fe$

ಮೇಲಿನ ರಾಸಾಯನಿಕ ಕ್ರಿಯೆಯ ವಿಧ

(A) ಸಂಯೋಗ ಕ್ರಿಯೆ (B) ದ್ವಿಸ್ಥಾನ ಪಲ್ಲಟ ಕ್ರಿಯೆ

(C) ವಿಭಜನ ಕ್ರಿಯೆ (D) ಸ್ಥಾನಪಲ್ಲಟ ಕ್ರಿಯೆ

9. '$R$' ರೋಧವನ್ನು ಹೊಂದಿರುವ ಒಂದು ಲೋಹದ ತಂತಿಯನ್ನು ಮೂರು ಸಮಾನ ಭಾಗಗಳಾಗಿ ಕತ್ತರಿಸಲಾಗಿದೆ. ನಂತರ ಈ ಭಾಗಗಳನ್ನು ಸಮಾಂತರವಾಗಿ ಸಂಪರ್ಕಿಸಲಾಗಿದೆ. ಈ ಸಂಯೋಜನೆಯ ಒಟ್ಟು ರೋಧವು $R'$ ಆದರೆ $R : R'$ ನ ಬೆಲೆ

(A) 1 : 3 (B) 9 : 1

(C) 1 : 9 (D) 3 : 1

10. ಬಟಾಣಿ ಸಸ್ಯಗಳ ವಿಭಿನ್ನ ರೂಪಗಳನ್ನು ತೋರಿಸುವ ಕೆಳಗಿನ ಕೋಷ್ಟಕವನ್ನು ಗಮನಿಸಿ :

| ***ಬೀಜದ ಬಣ್ಣ*** | ***ಹೂವಿನ ಸ್ಥಾನ*** |
|---|---|
| ಹಸಿರು ( $G$ ) | ಎಲೆಯ ಕಂಕುಳು ( $A$ ) |
| ಹಳದಿ ( $g$ ) | ಕಾಂಡದ ತುದಿ ( $a$ ) |

ಹಸಿರು ಬೀಜ ಮತ್ತು ಕಾಂಡದ ತುದಿಯಲ್ಲಿ ಹೂಗಳನ್ನು ಹೊಂದಿರುವ ತಳಿ ಗುಣದ ಸೂಚಕವೆಂದರೆ

(A) gGAa (B) GgAa

(C) GgAA (D) Ggaa

11. ***A*-ಪಟ್ಟಿಯಲ್ಲಿ ಸಾಧನಗಳ ಹೆಸರುಗಳನ್ನು ಮತ್ತು *B*-ಪಟ್ಟಿಯಲ್ಲಿ ಅವುಗಳ ಅನುರೂಪ ಕಾರ್ಯಗಳನ್ನು ನೀಡಲಾಗಿದೆ. ಅವುಗಳನ್ನು ಹೊಂದಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ.** $4 \times 1 = 4$

| ***A ಪಟ್ಟಿ*** | ***B ಪಟ್ಟಿ*** |
|---|---|
| (A) ದಿಕ್ಪರಿವರ್ತಕ | (i) ಒಂದು ಮಂಡಲದಲ್ಲಿ ವಿದ್ಯುತ್ ಪ್ರವಾಹದ ಉಪಸ್ಥಿತಿಯನ್ನು ಕಂಡುಹಿಡಿಯುತ್ತದೆ |
| (B) ಫ್ಯೂಸ್ | (ii) ಯಾಂತ್ರಿಕ ಶಕ್ತಿಯನ್ನು ವಿದ್ಯುತ್ ಶಕ್ತಿಯನ್ನಾಗಿ ಪರಿವರ್ತಿಸುತ್ತದೆ |
| (C) ಗೆಲ್ವನೋಮೀಟರ್ | (iii) ವಿಭವಾಂತರವನ್ನು ಅಳೆಯುತ್ತದೆ |
| (D) ವಿದ್ಯುತ್‌ಜನಕ | (iv) ವಾಹಕದ ಚಲನೆಯ ದಿಕ್ಕನ್ನು ತೋರಿಸುತ್ತದೆ |
| | (v) ವಿದ್ಯುತ್ ಉಪಕರಣಗಳನ್ನು ರಕ್ಷಿಸುತ್ತದೆ |
| | (vi) ವಿದ್ಯುತ್ ಪ್ರವಾಹದ ದಿಕ್ಕನ್ನು ಹಿಮ್ಮುಖಗೊಳಿಸುತ್ತದೆ |
| | (vii) ವಿದ್ಯುತ್‌ಶಕ್ತಿಯನ್ನು ಯಾಂತ್ರಿಕ ಶಕ್ತಿಯನ್ನಾಗಿ ಪರಿವರ್ತಿಸುತ್ತದೆ |

**ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** $7 \times 1 = 7$

12. ಗೋಳೀಯ ದರ್ಪಣದ ವಕ್ರತಾ ಕೇಂದ್ರ ಎಂದರೇನು ?

13. ಅವಾಯುವಿಕ ಉಸಿರಾಟದ ಉತ್ಪನ್ನಗಳನ್ನು ಹೆಸರಿಸಿ.

14. ಕೋವೇಲೆಂಟ್ ಬಂಧ (ಸಹವೇಲೇನ್ಸೀಯ ಬಂಧ) ಎಂದರೇನು ?

15. ಮಾನವನ ಕಣ್ಣಿನ ಪಾಪೆಯ ಕಾರ್ಯವೇನು ?

16. ಬ್ಯಾಕ್ಟೀರಿಯಾಗಳಂತಹ ಸೂಕ್ಷ್ಮಜೀವಿಗಳನ್ನು ವಿಘಟಕರು ಎನ್ನುವರು. ಏಕೆ ?

17. ಆಲ್ಕೈನ್‌ಗಳ ಮೊದಲ ಸದಸ್ಯವನ್ನು ಹೆಸರಿಸಿ ಮತ್ತು ಅದರ ಅಣುಸೂತ್ರವನ್ನು ಬರೆಯಿರಿ.

18. ಪ್ರಭೇದೀಕರಣಕ್ಕೆ ಕಾರಣವಾಗುವ ಅಂಶಗಳನ್ನು ಹೆಸರಿಸಿ.

**ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** $26 \times 2 = 52$

19. ಒಂದು ಬಲ್ಬಿನ ಮೇಲೆ 220 V ಮತ್ತು 40 W ಎಂದು ಗುರುತು ಮಾಡಲಾಗಿದೆ. ಆ ಬಲ್ಬ್‌ನಲ್ಲಿ ಹರಿಯುವ ವಿದ್ಯುತ್ಪ್ರವಾಹ ಮತ್ತು ಅದರ ರೋಧವನ್ನು ಲೆಕ್ಕಾಚಾರ ಮಾಡಿ.

20. ಒಂದು ಆಮ್ಲವು ಲೋಹದ ಕಾರ್ಬೋನೇಟ್‌ನೊಂದಿಗೆ ವರ್ತಿಸಿದಾಗ ಬಿಡುಗಡೆಯಾಗುವ ಅನಿಲವನ್ನು ಹೆಸರಿಸಿ. ಈ ಅನಿಲವನ್ನು ಸುಣ್ಣದ ತಿಳಿನೀರಿನ ಮೂಲಕ ಹಾಯಿಸಿದಾಗ ಉಂಟಾಗುವ ರಾಸಾಯನಿಕ ಕ್ರಿಯೆಯ ಸಮೀಕರಣವನ್ನು ಬರೆಯಿರಿ. ಈ ಕ್ರಿಯೆಯಲ್ಲಿ ದೊರೆಯುವ ಪ್ರಕ್ಷೇಪದ ಬಣ್ಣ ಯಾವುದು ?

***ಅಥವಾ***

ವೈಜ್ಞಾನಿಕ ಕಾರಣ ಕೊಡಿ :

(i) ಆಮ್ಲವನ್ನು ಸಾರರಿಕ್ತಗೊಳಿಸುವಾಗ ಆಮ್ಲವನ್ನು ನೀರಿಗೆ ಸೇರಿಸಬೇಕು.

(ii) ಪ್ಲಾಸ್ಟರ್ ಆಫ್ ಪ್ಯಾರೀಸ್ ಅನ್ನು ತೇವಾಂಶ ನಿರೋಧಕ ಸಂಗ್ರಾಹಕದಲ್ಲಿ ಸಂಗ್ರಹಿಸಿ ಇಡಬೇಕು.

21. ತೆರೆದ ಪತ್ರರಂಧ್ರವನ್ನು ತೋರಿಸುವ ಚಿತ್ರವನ್ನು ಬರೆದು, ಕೆಳಗಿನ ಭಾಗಗಳನ್ನು ಗುರುತಿಸಿ :

(i) ಕಾವಲು ಕೋಶಗಳು (ii) ಪತ್ರರಂಧ್ರ

22. (i) ಟಿಂಡಾಲ್ ಪರಿಣಾಮ ಎಂದರೇನು ?


(ii) ಬಿಳಿಯ ಬೆಳಕು ಪಟ್ಟಕದಿಂದ ವರ್ಣವಿಭಜನೆಯಾದಾಗ ಕನಿಷ್ಠವಾಗಿ ಬಾಗುವ ಬಣ್ಣ ಮತ್ತು ಗರಿಷ್ಠವಾಗಿ ಬಾಗುವ ಬಣ್ಣವನ್ನು ಹೆಸರಿಸಿ.

***ಅಥವಾ***

(i) ಕಣ್ಣಿನ ಹೊಂದಾಣಿಕಾ ಸಾಮರ್ಥ್ಯ ಎಂದರೇನು ?

(ii) ಸಾಮಾನ್ಯ ದೃಷ್ಟಿಯುಳ್ಳವರಿಗೆ ದೂರಬಿಂದು ಮತ್ತು ಸಮೀಪ ಬಿಂದುಗಳಾವುವು ?

23. ಕೆಳಗೆ ಕೊಟ್ಟಿರುವ ಚಿತ್ರಗಳು ಮೂರು ಬೇರೆ ಬೇರೆ ಪ್ರಾಣಿಗಳ ಹೃದಯಗಳನ್ನು ಪ್ರತಿನಿಧಿಸುತ್ತವೆ. ಅದನ್ನು ಗಮನಿಸಿ ಮತ್ತು ಪ್ರಶ್ನೆಗೆ ಉತ್ತರಿಸಿ :



1 2 3

ಇವುಗಳಲ್ಲಿ ಯಾವ ಹೃದಯವು ಅಧಿಕ ಶಕ್ತಿಯ ಅವಶ್ಯಕತೆ ಇರುವ ಪ್ರಾಣಿಗಳಿಗೆ ಉಪಯುಕ್ತ ? ಏಕೆ ?

*ಅಥವಾ*

*x* ಮತ್ತು *y* ಪ್ರಾಣಿಗಳ ಸಣ್ಣ ಕರುಳಿನ ಅಂದಾಜು ಉದ್ದಗಳನ್ನು ಕೋಷ್ಟಕದಲ್ಲಿ ನೀಡಲಾಗಿದೆ. ಅದನ್ನು ಗಮನಿಸಿ ಮತ್ತು ಪ್ರಶ್ನೆಗೆ ಉತ್ತರಿಸಿ :

| *ಪ್ರಾಣಿಗಳು* | *ಸಣ್ಣ ಕರುಳಿನ ಅಂದಾಜು ಉದ್ದ* |
|---|---|
| *x* | 20 ರಿಂದ 40 ಅಡಿಗಳು |
| *y* | 5 ರಿಂದ 8 ಅಡಿಗಳು |

ಕೋಷ್ಟಕದಲ್ಲಿರುವ ಸಸ್ಯಾಹಾರಿ ಮತ್ತು ಮಾಂಸಾಹಾರಿ ಪ್ರಾಣಿಗಳನ್ನು ಗುರುತಿಸಿ ಮತ್ತು ನಿಮ್ಮ ತೀರ್ಮಾನವನ್ನು ವೈಜ್ಞಾನಿಕ ಕಾರಣಗಳೊಂದಿಗೆ ಪುಷ್ಟೀಕರಿಸಿ.

24. (i) ಅಲ್ಯುಮಿನಿಯಂ, ಸಾರರಿಕ್ತ ಹೈಡ್ರೋಕ್ಲೋರಿಕ್ ಆಮ್ಲದ ಜೊತೆ ಪ್ರತಿವರ್ತಿಸುವ ಕ್ರಿಯೆಯ ಸರಿದೂಗಿಸಿದ ರಾಸಾಯನಿಕ ಸಮೀಕರಣ ಬರೆಯಿರಿ.

(ii) ಒಂದು ಲೋಹವು ಸಾರಯುಕ್ತ ನೈಟ್ರಿಕ್ ಆಮ್ಲದೊಂದಿಗೆ ವರ್ತಿಸಿದಾಗ ಹೈಡ್ರೋಜನ್ ಅನಿಲ ಬಿಡುಗಡೆಯಾಗುವುದಿಲ್ಲ. ಕಾರಣ ಕೊಡಿ.

*ಅಥವಾ*

NaCl ಮತ್ತು $MgCl_2$ ಗಳ ಉಂಟಾಗುವಿಕೆಯನ್ನು ಇಲೆಕ್ಟ್ರಾನ್ ಚುಕ್ಕಿ ವಿನ್ಯಾಸದ ಸಹಾಯದಿಂದ ತೋರಿಸಿ.

25. ಒಂದು ಸರಳ ವಿದ್ಯುತ್ ಮೋಟಾರ್‌ನ ಚಿತ್ರವನ್ನು ಬರೆದು, ಕೆಳಗಿನ ಭಾಗಗಳನ್ನು ಗುರುತಿಸಿ :

(i) ಕುಂಚಗಳು (ii) ವಿದ್ಯುತ್ ಕೋಶ

26. ಹೈಡ್ರೋಕಾರ್ಬನ್‌ಗಳಲ್ಲಿ ಆದೇಶನ ಕ್ರಿಯೆಯನ್ನು ಒಂದು ಉದಾಹರಣೆಯೊಂದಿಗೆ ವಿವರಿಸಿ.

***ಅಥವಾ***

ಸಾಬೂನುಗಳು ಸ್ವಚ್ಛಗೊಳಿಸುವ ಕ್ರಿಯೆಯನ್ನು ವಿವರಿಸಿ.

27. ನ್ಯೂರಾನ್ ರಚನೆಯನ್ನು ತೋರಿಸುವ ಚಿತ್ರವನ್ನು ಬರೆದು, ಕೆಳಗಿನ ಭಾಗಗಳನ್ನು ಗುರುತಿಸಿ :

(i) ಸ್ಪಷ್ಟವಾದ ಕೋಶಕೇಂದ್ರ (ನ್ಯೂಕ್ಲಿಯಸ್) ಹೊಂದಿರುವ ಭಾಗ

(ii) ಡೆಂಡ್ರೈಟ್

28. ಶಕ್ತಿಯ ಉತ್ತಮ ಆಕರದ ಗುಣಲಕ್ಷಣಗಳನ್ನು ಪಟ್ಟಿಮಾಡಿ.

29. ಒಬ್ಬ ವ್ಯಕ್ತಿಯ ಸಂತಾನ ಫಲವತ್ತತೆಯ ನಿರ್ವಹಣೆಯಲ್ಲಿ

(i) ದೇಹದಲ್ಲಿ ವೃಷಣಗಳ ಸ್ಥಾನ

(ii) ಟೆಸ್ಟೋಸ್ಟಿರಾನ್‌ನ ಸ್ರವಿಕೆ

(iii) ಪ್ರೋಸ್ಟ್ರೇಟ್ ಗ್ರಂಥಿಯ ಸ್ರವಿಕೆ, ಇವುಗಳು ಪರಸ್ಪರ ಪೂರಕವಾಗಿವೆ, ವೈಜ್ಞಾನಿಕವಾಗಿ ವಿವರಿಸಿ.

30. ಪರ್ಯಾಪ್ತ ಮತ್ತು ಅಪರ್ಯಾಪ್ತ ಹೈಡ್ರೋಕಾರ್ಬನ್‌ಗಳ ಎರಡು ನಿರ್ದಿಷ್ಟ ಗುಂಪುಗಳ ಸಾಮಾನ್ಯ ಸೂತ್ರವು $C_nH_{2n}$ ಆಗಿದೆ. $n = 3$ ಆದಾಗ ಪ್ರತಿಯೊಂದು ಗುಂಪಿನ ಸದಸ್ಯರ ರಚನಾಸೂತ್ರ ಬರೆಯಿರಿ.

31. ಪೀನ ಮಸೂರದ $2F_1$ ನಲ್ಲಿ ವಸ್ತುವನ್ನು ಇಟ್ಟಾಗ ಉಂಟಾಗುವ ಪ್ರತಿಬಿಂಬವನ್ನು ತೋರಿಸುವ ರೇಖಾಚಿತ್ರವನ್ನು ಬರೆಯಿರಿ. ($F_1$: ಪ್ರಧಾನ ಸಂಗಮ)

32. ಆಧುನಿಕ ಆವರ್ತಕ ಕೋಷ್ಟಕದಲ್ಲಿನ *A, B, C, D* ಧಾತುಗಳ ಸ್ಥಾನಗಳನ್ನು ಕೆಳಗಿನ ಕೋಷ್ಟಕದಲ್ಲಿ ನೀಡಲಾಗಿದೆ. ಕೋಷ್ಟಕವನ್ನು ಗಮನಿಸಿ. ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :

| | **ವರ್ಗ 1** | **ವರ್ಗ 2** |
|---|---|---|
| ಆವರ್ತ 3 | *A* | *B* |
| ಆವರ್ತ 4 | *C* | *D* |

(i) ಅತೀ ಹೆಚ್ಚು ಪರಮಾಣು ಗಾತ್ರವನ್ನು ಹೊಂದಿರುವ ಧಾತು ಯಾವುದು ? ಏಕೆ ?

(ii) ಅತೀ ಕಡಿಮೆ ಲೋಹೀಯ ಗುಣವನ್ನು ಹೊಂದಿರುವ ಧಾತು ಯಾವುದು ? ಏಕೆ ?

33. ಶಲಾಕಾಗ್ರದ ಮೇಲೆ ಪರಾಗದ ಮೊಳೆಯುವಿಕೆಯನ್ನು ತೋರಿಸುವ ಚಿತ್ರವನ್ನು ಬರೆದು ಪರಾಗಸ್ಪರ್ಶ ಕ್ರಿಯೆ ನಡೆಯುವ ಭಾಗವನ್ನು ಗುರುತಿಸಿ.

34. ಹೈಪರ್ ಮೆಟ್ರೋಪಿಯ ಅಥವಾ ದೂರದೃಷ್ಟಿ ಎಂದರೇನು ? ಅದನ್ನು ಸರಿಪಡಿಸಲು ಬಳಸುವ ಮಸೂರದ ವಿಧವನ್ನು ಹೆಸರಿಸಿ.

35. ವಿದ್ಯುತ್ ಉಪಕರಣಗಳನ್ನು ಸಮಾನಾಂತರವಾಗಿ ಜೋಡಿಸುವುದರಿಂದ ಆಗುವ ಪ್ರಯೋಜನಗಳನ್ನು ಪಟ್ಟಿಮಾಡಿ.

36. ಈ ಕೆಳಗಿನ ಕ್ರಿಯೆಗಳಿಗೆ ಸರಿದೂಗಿಸಿದ ರಾಸಾಯನಿಕ ಸಮೀಕರಣ ಬರೆಯಿರಿ :

(i) ಹೈಡ್ರೋಜನ್ + ಕ್ಲೋರಿನ್ $\rightarrow$ ಹೈಡ್ರೋಜನ್ ಕ್ಲೋರೈಡ್

(ii) ಸೋಡಿಯಂ + ನೀರು $\rightarrow$ ಸೋಡಿಯಂ ಹೈಡ್ರಾಕ್ಸೈಡ್ + ಹೈಡ್ರೋಜನ್

37. ಮಾನವನ ವಿಸರ್ಜನಾಂಗವ್ಯೂಹವನ್ನು ತೋರಿಸುವ ಚಿತ್ರವನ್ನು ಬರೆಯಿರಿ. ಈ ಕೆಳಗಿನ ಭಾಗಗಳನ್ನು ಗುರುತಿಸಿ :

(i) ಮೂತ್ರಕೋಶ

(ii) ಮೂತ್ರನಾಳ

38. ಎರಡು ಕಾಂತೀಯ ಬಲರೇಖೆಗಳು ಒಂದನ್ನೊಂದು ಛೇದಿಸುವುದಿಲ್ಲ ಏಕೆ ? ಕಾಂತೀಯ ಬಲರೇಖೆಗಳ ಸಾಂದ್ರತೆಯು ದಂಡಕಾಂತದ ಯಾವ ಭಾಗದಲ್ಲಿ ಹೆಚ್ಚಾಗಿರುತ್ತದೆ ?

39. ಲೋಹಗಳಿಗೆ ಸಂಬಂಧಿಸಿದಂತೆ ಕುಟ್ಯತೆ ಮತ್ತು ತನ್ಯತೆ ಎಂದರೇನು ?

40. ಸ್ವಕೀಯ ಪರಾಗಸ್ಪರ್ಶ ಮತ್ತು ಪರಕೀಯ ಪರಾಗಸ್ಪರ್ಶಗಳ ನಡುವಣ ವ್ಯತ್ಯಾಸವೇನು ?

41. 0·4 m ಸಂಗಮದೂರವನ್ನು ಹೊಂದಿರುವ ಪೀನ ಮಸೂರದ ಸಾಮರ್ಥ್ಯವನ್ನು ಲೆಕ್ಕಾಚಾರ ಮಾಡಿ.

42. ಆಧುನಿಕ ಆವರ್ತಕ ನಿಯಮವನ್ನು ನಿರೂಪಿಸಿ. ಆಧುನಿಕ ಆವರ್ತಕ ಕೋಷ್ಟಕದ ಮೊದಲ ಆವರ್ತದ ಧಾತುಗಳನ್ನು ಹೆಸರಿಸಿ.

43. "ಸೂಕ್ಷ್ಮ ಪರಿಸ್ಥಿತಿಗಳನ್ನು ಎದುರಿಸಲು ದೇಹದಲ್ಲಿ ಅಡ್ರಿನಾಲಿನ್ ಸ್ರವಿಕೆ ಅತ್ಯಗತ್ಯವಾಗಿದೆ." – ಸಮರ್ಥಿಸಿ.

44. ಬಿಳಿ ಬಣ್ಣದ ರೋಹಿತದ ಪುನರ್‌ಸಂಯೋಜನೆಯ ಚಿತ್ರವನ್ನು ಬರೆಯಿರಿ. ಈ ಕೆಳಗಿನ ಭಾಗಗಳನ್ನು ಗುರುತಿಸಿ :

(i) ಪಟ್ಟಕ

(ii) ಪರದೆ

**ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** $5 \times 3 = 15$

45. ನೀರಿನ ವಿದ್ಯುದ್ವಿಭಜನೆಯಲ್ಲಿ ಉಪಯೋಗಿಸುವ ಉಪಕರಣದ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :

(i) ಕ್ಯಾಥೋಡ್

(ii) ಗ್ರಾಫೈಟ್ ದಂಡ

46. ಕೆಳಗಿನ ಸಂದರ್ಭಗಳನ್ನು ಕಲ್ಪಿಸಿಕೊಳ್ಳಿ :

(i) ಕಾರ್ಯಕ್ರಮದ ಕೊನೆಯಲ್ಲಿ ಚಪ್ಪಾಳೆ ತಟ್ಟುವುದು

(ii) ದೇಹದಲ್ಲಿ ಏರುಪೇರಾಗುತ್ತಿರುವ ರಕ್ತದ ಒತ್ತಡ.

ಈ ಸಂದರ್ಭಗಳು ಕ್ರಿಯಾತ್ಮಕವಾಗಿ ಹೇಗೆ ಭಿನ್ನವಾಗಿವೆ ? ಕಾರಣ ಕೊಡಿ.

***ಅಥವಾ***

"ಗೊತ್ತಾಗದೇ ಮುಳ್ಳಿನ ಮೇಲೆ ಕಾಲಿಟ್ಟಾಗ ನಮ್ಮ ಕಾಲನ್ನು ಹಿಂದಕ್ಕೆ ಎಳೆದುಕೊಳ್ಳುತ್ತೇವೆ."

(i) ಈ ಕ್ರಿಯೆಯಲ್ಲಿ ನಡೆಯುವ ಘಟನೆಗಳನ್ನು ಕ್ರಮಾನುಗತವಾಗಿ ನಿರೂಪಿಸಿ.

(ii) ಮಾನವನ ನರವ್ಯೂಹದ ಯಾವ ಭಾಗ ಈ ಕ್ರಿಯೆಯನ್ನು ನಿಯಂತ್ರಿಸುತ್ತದೆ ?

47. ಒಂದು ನಿಮ್ನ ಮಸೂರದ ಸಂಗಮ ದೂರವು 30 cm ಆಗಿದೆ. ಮಸೂರದಿಂದ ಪ್ರತಿಬಿಂಬವು 20 cm ದೂರದಲ್ಲಿ ಉಂಟಾಗಲು ವಸ್ತುವನ್ನು ಮಸೂರದಿಂದ ಎಷ್ಟು ದೂರದಲ್ಲಿ ಇಡಬೇಕು ? ಹಾಗೂ ಮಸೂರದಿಂದ ಉಂಟಾಗುವ ವರ್ಧನೆಯನ್ನು ಕಂಡುಹಿಡಿಯಿರಿ.

48. ಲೋಹದ ಮೇಲೆ ಹಬೆಯ ವರ್ತನೆಯನ್ನು ತೋರಿಸುವ ಪ್ರಯೋಗದ ಉಪಕರಣಗಳ ಜೋಡಣೆಯ ಚಿತ್ರವನ್ನು ಬರೆಯಿರಿ. ಈ ಕೆಳಗಿನ ಭಾಗಗಳನ್ನು ಗುರುತಿಸಿ :

(i) ಲೋಹದ ಚೂರು

(ii) ವಿತರಣಾ ನಳಿಕೆ

49. (i) ಪಳೆಯುಳಿಕೆ ಇಂಧನಗಳ ದಹನ ಹಸಿರುಮನೆ ಪರಿಣಾಮಕ್ಕೆ ಹೇಗೆ ಕಾರಣವಾಗಿದೆ ?

(ii) ಅಂತರ್ಜಲವನ್ನು ಉಳಿಸಿಕೊಳ್ಳುವಲ್ಲಿ ಉಂಟಾಗಿರುವ ವೈಫಲ್ಯಕ್ಕೆ ಕಾರಣಗಳನ್ನು ಪಟ್ಟಿಮಾಡಿ.

***ಅಥವಾ***

(i) ಪ್ಲಾಸ್ಟಿಕ್ ಉತ್ಪನ್ನಗಳ ಮರುಬಳಕೆ, ಮರುಚಕ್ರೀಕರಣ ವಿಧಾನಕ್ಕಿಂತ ಉತ್ತಮ. ಏಕೆ ?

(ii) "ಸ್ಥಳೀಯ ಜನರು ಅರಣ್ಯ ಸಂಪನ್ಮೂಲಗಳ ಪಾಲುದಾರರು." ವಿವರಿಸಿ.

**ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** $3 \times 4 = 12$

50. (i) ವಿದ್ಯುತ್ ವಿಭವಾಂತರವನ್ನು ನಿರೂಪಿಸಿ. ಅಮ್ಮೀಟರನ್ನು ವಿದ್ಯುತ್ ಮಂಡಲದಲ್ಲಿ ಹೇಗೆ ಸಂಪರ್ಕಿಸುತ್ತಾರೆ ?

    (ii) ಒಂದು ವಿದ್ಯುತ್‌ಮಂಡಲದಲ್ಲಿ ಫ್ಯೂಸ್ ಹಾಗೂ ವಿದ್ಯುತ್ ಬಲ್ಬ್‌ಗಳಿಗೆ ವಿದ್ಯುತ್‌ಪ್ರವಾಹದ ಉಷ್ಣೋತ್ಪಾದನಾ ಪರಿಣಾಮದ ಪ್ರಾಯೋಗಿಕ ಅನ್ವಯವು ಹೇಗೆ ಉಪಯೋಗವಾಗಿದೆ ? ವಿವರಿಸಿ.

***ಅಥವಾ***

    (i) ಓಮ್‌ನ ನಿಯಮವನ್ನು ನಿರೂಪಿಸಿ.

    (ii) ವಾಹಕದ ರೋಧವು ಯಾವ ಅಂಶಗಳ ಮೇಲೆ ಅವಲಂಬಿತವಾಗಿದೆ ಎಂಬುದನ್ನು ವಿವರಿಸಿ.

51. (i) ತಟಸ್ಥೀಕರಣ ಕ್ರಿಯೆ ಎಂದರೇನು ?

    (ii) ಕ್ಲೋರ್ – ಆಲ್ಕಲಿ ಪ್ರಕ್ರಿಯೆಯ ಉತ್ಪನ್ನಗಳನ್ನು ಹೆಸರಿಸಿ. ಪ್ರತಿಯೊಂದರ ಒಂದೊಂದು ಉಪಯೋಗವನ್ನು ಬರೆಯಿರಿ.

52. (i) ಪಳೆಯುಳಿಕೆಗಳ ಕಾಲನಿರ್ಣಯಕ್ಕೆ ಸಾಪೇಕ್ಷ ವಿಧಾನವು ಹೇಗೆ ಸಹಾಯಕವಾಗಿದೆ ?

    (ii) "ಜೀವಿಯೊಂದರ ಜೀವಿತಕಾಲದ ಅನುಭವಗಳು ಜೀವವಿಕಾಸವನ್ನು ನಿರ್ದೇಶಿಸಲು ಸಾಧ್ಯವಿಲ್ಲ." ಏಕೆ ?

    (iii) "ತಂದೆಯಿಂದ ಆನುವಂಶೀಯವಾಗುವ ವರ್ಣತಂತುಗಳು ಮಗುವಿನ ಲಿಂಗವನ್ನು ನಿರ್ಧರಿಸುತ್ತವೆ." ವಿವರಿಸಿ.